# ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ,

## ಟಿ. ನರಸೀಪುರ.

## ಸಿ. ಸಿ ನಂ. 1958/2025

ಪಿರ್ಯಾದಿದಾರರು : ಸರ್ಕಾರ ಪರವಾಗಿ ಬನ್ನೂರು ಪೊಲೀಸ್ ಠಾಣೆ

ವಿರುದ್ಧ

ಆರೋಪಿತರು : 1. ಕೋಡಿ @ ಕೆ ಕೋಡಿಗೌಡ,
ಬಿನ್ ಲೇಟ್ ಕೋಡಿಗೌಡ @ ಕೂನಯ್ಯ, 60 ವರ್ಷ,

2. ಚಿಕ್ಕಹುಚ್ಚ,
ಬಿನ್ ಲೇಟ್ ಕೋಡಿಗೌಡ @ ಕೂನಯ್ಯ, 60 ವರ್ಷ,

3.ಪಾಪ ಬಿನ್ ಲೇಟ್ ಕೂನಯ್ಯ, 53 ವರ್ಷ,

4. ಯೋಗರಾಜು ಬಿನ್ ಲೇಟ್ ಕೂನಯ್ಯ, 40 ವರ್ಷ,

ಎಲ್ಲರ ವಾಸಃ ಚಾಮಲಾಪುರ ಗ್ರಾಮ,
ಬನ್ನೂರು ಹೋಬಳಿ, ಟಿ.ನರಸೀಪುರ ತಾಲ್ಲೂಕು,
ಮೈಸೂರು ಜಿಲ್ಲೆ.

## ದೋಷಾರೋಪಣೆ

**ಶ್ರೀ ಸಚಿನ್ ಹೆಚ್.ಆರ್, ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ, ಟಿ.ನರಸೀಪುರ, ಆದ ನಾನು ಮೇಲ್ಕಂಡ ಆರೋಪಿಯಾದ ನಿಮ್ಮ ಮೇಲೆ ಕೆಳಕಂಡಂತೆ ದೋಷಾರೋಪಣೆಯನ್ನು ಮಾಡುತ್ತೇನೆ.**

ನಿಮ್ಮ ಮೇಲೆ ಹೊರಿಸಲಾದ ದೋಷಾರೋಪಣೆ ಏನೆಂದರೆ

ದಿನಾಂಕ 04.03.2025 ರಂದು ಬೆಳಿಗ್ಗೆ 11.00 ಗಂಟೆ ಸಮಯದಲ್ಲಿ ಬನ್ನೂರು ಪೋಲೀಸ್ ಠಾಣಾ ವ್ಯಾಪ್ತಿಯ ಚಾಮಲಾಪುರ ಗ್ರಾಮದ ಪ್ರಭಾಕರ್ ಬಿನ್ ಸಿದ್ದೇಗೌಡರವರ ಮನೆಯ ಮುಂಭಾಗ ಚಾಸಾ-1 ಶೃತಿ ಮತ್ತು ಚಾಸಾ-2 ಕೃಷ್ಣೇಗೌಡ ರವರು ಜಮೀನು ಕೆಲಸ ಮುಗಿಸಿಕೊಂಡು ಮನೆಗೆ ಹೋಗುತ್ತಿದ್ದಾಗ ಆರೋಪಿತರಾದ ನೀವು ಸಾಮಾನ ಉದ್ದೇಶ ಹೊಂದಿ ನಿಮ್ಮ ಪೈಕಿ 1 ಮತ್ತು 3 ನೇ ಆರೋಪಿತರಾದ ನೀವು ಚಾಸಾ-1 ರವರನ್ನು ಅಡ್ಡಗಟ್ಟಿ ಮುಂದಕ್ಕೆ

ಹೋಗದಂತೆ ನಿಲ್ಲಿಸಿ ಅಕ್ರಮ ತಡೆ ಉಂಟು ಮಾಡಿದ್ದು, ಆ ಮೂಲಕ ಆರೋಪಿಗಳಾದ ನೀವು ಭಾರತೀಯ ನ್ಯಾಯ ಸಂಹಿತೆ ಕಲಂ.126(2) ಸಹವಾಚಕ 3(5) ರನ್ವಯ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ.

ಎರಡನೇಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ನಿಮ್ಮ ಪೈಕಿ 1 ಮತ್ತು 3 ನೇ ಆರೋಪಿತರಾದ ನೀವು ಚಾಸಾ-1 ಮತ್ತು 2 ರವರನ್ನು ನೀವು ನಮ್ಮ ಮೇಲೆ ಜಮೀನಿನ ವಿಚಾರದಲ್ಲಿ ಪೊಲೀಸ್ ಕಂಪ್ಲೆಂಟ್ ಕೊಟ್ಟಿದ್ದೀರಾ ಬೋಳಿ ಮಕ್ಕಳ, ಸೂಳೆ ಮಕ್ಕಳ ಎಂದು ಅವಾಚ್ಯ ಶಬ್ದಗಳಿಂದ ನಿಂದಿಸಿದ್ದು, ಆ ಮೂಲಕ ಆರೋಪಿಗಳಾದ ನೀವು ಭಾರತೀಯ ನ್ಯಾಯ ಸಂಹಿತೆ ಕಲಂ.352 ಸಹವಾಚಕ 3(5) ರನ್ವಯ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ.

ಮೂರನೇಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ನಿಮ್ಮ ಪೈಕಿ 3 ನೇ ಆರೋಪಿಯಾದ ನೀವು ರಿಪೀಸ್ ಪಟ್ಟಿಯಿಂದ ಚಾಸಾ-2 ರವರ ತಲೆಗೆ, ಕೈಗೆ ಮತ್ತು 3 ನೇ ಆರೋಪಿಯಾದ ನೀವು ಕಬ್ಬಿಣದ ಸರಳಿನಿಂದ ಚಾಸಾ-1 ರವರ ತಲೆಗೆ ಕೈಗೆ ಹೊಡೆದು ಸಾಮಾನ್ಯ ಸ್ವರೂಪದ ಗಾಯವನ್ನುಂಟು ಮಾಡಿದ್ದು, ಆ ಮೂಲಕ ಆರೋಪಿಗಳಾದ ನೀವು ಭಾರತೀಯ ನ್ಯಾಯ ಸಂಹಿತೆ ಕಲಂ.118(2) ಸಹವಾಚಕ 3(5) ರನ್ವಯ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ.

ನಾಲ್ಕನೇಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ನಿಮ್ಮ ಪೈಕಿ 3 ನೇ ಆರೋಪಿಯಾದ ನೀವು ಜಗಳ ಬಿಡಿಸಲು ಹೋದ ಚಾಸಾ-1 ರವರ ನೈಟಿಯನ್ನು ಹಿಡಿದು ಎಳೆದಾಡಿ ಸಾರ್ವಜನಿಕ ಸ್ಥಳದಲ್ಲಿ ಅವಮಾನ ಪಡಿಸಿದ್ದು, ಆ ಮೂಲಕ ಆರೋಪಿಗಳಾದ ನೀವು ಭಾರತೀಯ ನ್ಯಾಯ ಸಂಹಿತೆ ಕಲಂ.74 ಸಹವಾಚಕ 3(5) ರನ್ವಯ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ.

ಐದನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ನಿಮ್ಮ ಪೈಕಿ 2 ಮತ್ತು 4 ನೇ ಆರೋಪಿತರಾದ ನೀವು ಚಾಸಾ–1 ಮತ್ತು 2 ರವರ ಮೈಕೆಗೆ ಕೈಗಳಿಂದ ಹೊಡೆದು ಸಾಮಾನ್ಯ ಸ್ವರೂಪದ ನೋವುಂಟು ಮಾಡಿದ್ದು, ಆ ಮೂಲಕ ಆರೋಪಿಗಳಾದ ನೀವು ಭಾರತೀಯ ನ್ಯಾಯ ಸಂಹಿತೆ ಕಲಂ.115(2) ಸಹವಾಚಕ 3(5) ರನ್ವಯ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ.

ಕೊನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ಚಾಸಾ–1 ಮತ್ತು 2 ರವರೊಂದಿಗೆ ಜಗಳ ತೆಗೆದು ಚಾಸಾ–1 ಮತ್ತು 2 ರವರಿಗೆ ನಿಮ್ಮನ್ನು ಕೊಲೆ ಮಾಡದೆ ಬಿಡುವುದಿಲ್ಲ ಎಂದು ಕೊಲೆ ಬೆದರಿಕೆ ಹಾಕಿದ್ದು, ಆ ಮೂಲಕ ಆರೋಪಿಗಳಾದ ನೀವು ಭಾರತೀಯ ನ್ಯಾಯ ಸಂಹಿತೆ ಕಲಂ.351(2), 351(3) ಸಹವಾಚಕ 3(5) ರನ್ವಯ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ.

ಮೇಲೆ ಹೇಳಿದ ಅಪರಾಧಗಳಿಗಾಗಿ ನೀವು ಈ ನ್ಯಾಯಾಲಯದಲ್ಲಿ ವಿಚಾರಣೆಗೆ ಒಳಪಡತಕ್ಕದ್ದು.

ದಿನಾಂಕಃ **17.03.2026.**

**(ಸಚಿನ್ ಹೆಚ್.ಆರ್)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ.**
**ಟಿ. ನರಸೀಪುರ.**

## **ಆರೋಪಿತರ ಹೇಳಿಕೆ**

ಪ್ರಶ್ನೆ-1 ಈಗ ಓದಿ ಹೇಳಿದ ಆರೋಪಣೆಯನ್ನು ಅರ್ಥ ಮಾಡಿಕೊಂಡಿರಾ ?

ಉತ್ತರಃ 1 ನೇ ಆರೋಪಿಃ

2 ನೇ ಆರೋಪಿಃ

3 ನೇ ಆರೋಪಿಃ

4 ನೇ ಆರೋಪಿಃ

ಪ್ರಶ್ನೆ-2 ಮೇಲೆ ಹೇಳಿದ ಆರೋಪಣೆಯನ್ನು ಒಪ್ಪಿಕೊಳ್ಳುವಿರಾ ? ಅಥವಾ ವಿಚಾರಣೆ ಆಗಬೇಕೆನ್ನುವಿರಾ?

ಉತ್ತರಃ 1 ನೇ ಆರೋಪಿಃ

2 ನೇ ಆರೋಪಿಃ

3 ನೇ ಆರೋಪಿಃ

4 ನೇ ಆರೋಪಿಃ

**(ಮೇಲ್ಕಂಡ ಆರೋಪಣೆಯನ್ನು ಆರೋಪಿತರಿಗೆ ತಿಳಿದ ಭಾಷೆಯಲ್ಲಿ ತೆರೆದ ನ್ಯಾಯಾಲಯದಲ್ಲಿ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ಬರೆದು ಕೊಂಡಿದ್ದು ಅವು ಸರಿಯಾಗಿರುತ್ತದೆ ಎಂದು ಈ ಮೂಲಕ ದೃಢೀಕರಿಸುತ್ತೇನೆ.)**

**(ಸಚಿನ್ ಹೆಚ್.ಆರ್)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ. ಎಫ್.ಸಿ., ಟಿ.ನರಸೀಪುರ.**

## **ಆರೋಪಿತರ ಸಹಿ**

1 ನೇ ಆರೋಪಿಃ

2 ನೇ ಆರೋಪಿಃ

3 ನೇ ಆರೋಪಿಃ

4 ನೇ ಆರೋಪಿಃ